# ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಲಬುರಗಿ

## ಅಧಿಸೂಚನೆ ಸಂಖ್ಯೆ 01/2023 ದಿನಾಂಕ 24.11.2023

ವಿಷಯ : ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಲಬುರಗಿಯ ಕಾನೂನು ಅಭಿರಕ್ಷಕ ಕಛೇರಿಯಲ್ಲಿ ಒಂದು ಸಹಾಯಕ / ಗುಮಾಸ್ತ, ಒಂದು ಸ್ವಾಗತಕಾರರು-ವ-ಡಾಟಾ ಎಂಟ್ರಿ ಆಪರೇಟರ್ ಮತ್ತು ಒಂದು ಜವಾನ ಹುದ್ದೆಗಳನ್ನು ಗುತ್ತಿಗೆ ಆಧಾರದಲ್ಲಿ ತಾತ್ಕಾಲಿಕ ಅವಧಿಗೆ ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸುವ ಕುರಿತು.

ಉಲ್ಲೇಖ 1 ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಪತ್ರ ಸಂಖ್ಯೆ:ಕರಾಕಾಸೇಪ್ರಾ:31/LADC-Human Resources / 2023 ದಿನಾಂಕ 17.11.2023

2 NALSA- Legal Aid Defense Counsel Modifed Scheme-2022.

******

**ಪ್ರಸ್ತಾವನೆ:**

ಕಲಬುರಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಲ್ಲಿ ಕಲಬುರಗಿಯ ಕಾನೂನು ಅಭಿರಕ್ಷಕ ಕಛೇರಿಯಲ್ಲಿ 1-ಆಡಳಿತ ಸಹಾಯಕ / ಗುಮಾಸ್ತ, 1-ಸ್ವಾಗತಕಾರರು-ವ-ಡಾಟಾ ಎಂಟ್ರಿ ಆಪರೇಟರ್ ಮತ್ತು 1-ಜವಾನ ಹುದ್ದೆಗಳನ್ನು ಗುತ್ತಿಗೆ ಆಧಾರದಲ್ಲಿ ತಾತ್ಕಾಲಿಕ ಅವಧಿಗೆ ಅಂದರೆ 06 ತಿಂಗಳ ಅವಧಿಗೆ, ಕರ್ತವ್ಯ ನಿರ್ವಹಣೆಯು ತೃಪ್ತಿಕರವಾಗಿದ್ದಲ್ಲಿ ಸದರಿ ಹುದ್ದೆಗಳನ್ನು ಮುಂದುವರೆಯಬಹುದಾದ ಅವಧಿಗೆ ತುಂಬಿಕೊಳ್ಳಲು ಉಲ್ಲೇಖದ ಪತ್ರದಲ್ಲಿ ತಿಳಿಸಲಾಗಿರುತ್ತದೆ. ಅದೇ ರೀತಿ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಪತ್ರ ದಿನಾಂಕ 17.11.2023 ರಲ್ಲಿ ಮೇಲ್ಕಂಡ ಹುದ್ದೆಗಳಿಗೆ ಸಂಬಂಧಿಸಿದಂತೆ ವಿದ್ಯಾರ್ಹತೆ, ವೇತನ ಮತ್ತು ನಿರ್ವಹಿಸಬೇಕಾದ ಕರ್ತವ್ಯ ಹಾಗೂ ಹುದ್ದೆಯ ಕಾಲಾವಧಿ ಇತ್ಯಾದಿ ಬಗ್ಗೆ ತಿಳಿಸಲಾಗಿರುತ್ತದೆ.

1. ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಲಬುರಗಿಯಲ್ಲಿ ಕಾನೂನು ಅಭಿರಕ್ಷಕ ಕಛೇರಿಯಲ್ಲಿ ಆಡಳಿತ ಸಹಾಯಕ / ಗುಮಾಸ್ತ ಹುದ್ದೆಗೆ, ಗುತ್ತಿಗೆ ಆಧಾರದ ಮೇಲೆ, ಉಲ್ಲೇಖ 1 ಮತ್ತು 2 ರಲ್ಲಿ ನಮೂದಿಸಿರುವ ಪತ್ರಗಳಲ್ಲಿನ ಷರತ್ತುಗಳನ್ನು ಒಳಗೊಂಡಂತೆ ಅರ್ಹ ಅಭ್ಯರ್ಥಿಗಳಂದ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ.

| ಕ್ರ.ಸಂ. | ಹುದ್ದೆಯ ಹೆಸರು | ಹುದ್ದೆಗಳ ಸಂಖ್ಯೆ | ಮಾಸಿಕ ವೇತನ |
|---|---|---|---|
| 1. | ಆಡಳಿತ ಸಹಾಯಕ / ಗುಮಾಸ್ತ ಗುತ್ತಿಗೆ | 1 | ರೂ.19000/- |

**ವಿದ್ಯಾರ್ಹತೆ:**

- ಆಡಳಿತ ಸಹಾಯಕ / ಗುಮಾಸ್ತ ಹುದ್ದೆಗೆ ಸರ್ಕಾರದಿಂದ ಮಾನ್ಯತೆಗೊಂಡಂತಹ ಯಾವುದೇ ವಿಶ್ವವಿದ್ಯಾನಿಲಯದಿಂದ ಪದವಿ ವಿದ್ಯಾರ್ಹತೆಯನ್ನು ಹಾಗೂ ಕಂಪ್ಯೂಟರ್ ಜ್ಞಾನ ಹೊಂದಿರುವ ಅಭ್ಯರ್ಥಿಗಳಿಗೆ ಹಾಗೂ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸಲು ಆಸಕ್ತಿ ಇರುವಂತಹ ಸೂಕ್ತ/ಯೋಗ್ಯ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

2. ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಲಬುರಗಿಯ ಕಾನೂನು ಅಭಿರಕ್ಷಕ ಕಛೇರಿಯಲ್ಲಿ ಸ್ವಾಗತಕಾರರು-ವ-ಡಾಟಾ ಎಂಟ್ರಿ ಆಪರೇಟರ್ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ, ಉಲ್ಲೇಖ 1 ಮತ್ತು 2 ರಲ್ಲಿ ನಮೂದಿಸಿರುವ ಪತ್ರಗಳಲ್ಲಿನ ಷರತ್ತುಗಳನ್ನು ಒಳಗೊಂಡಂತೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ.

| ಕ್ರ.ಸಂ. | ಹುದ್ದೆಯ ಹೆಸರು | ಹುದ್ದೆಗಳ ಸಂಖ್ಯೆ | ಮಾಸಿಕ ವೇತನ |
|---|---|---|---|
| 1. | ಸ್ವಾಗತಕಾರರು-ವ-ಡಾಟಾ ಎಂಟ್ರಿ ಆಪರೇಟರ್ | 1 | ರೂ.17271/- |

**ವಿದ್ಯಾರ್ಹತೆ:**

- ಸರ್ಕಾರದಿಂದ ಮಾನ್ಯತೆಗೊಂಡಂತಹ ಯಾವುದೇ ವಿಶ್ವವಿದ್ಯಾನಿಲಯದಿಂದ ಪದವಿ ವಿದ್ಯಾರ್ಹತೆಯನ್ನು ಹೊಂದಿರಬೇಕು, ಉತ್ತಮವಾದ ಶಾಬ್ದಿಕ ಮತ್ತು ಬರವಣಿಗೆಯ ಸಂವಹನ ಕೌಶ್ಯಲವನ್ನು ಹೊಂದಿರಬೇಕು. ಸಂವಹನ ವ್ಯವಸ್ಥೆಗಳಾದ ಟೆಲಿಫೋನ್, ಫಾಕ್ಸ್ ಮತ್ತು ಸ್ವಿಚ್ ಬೋರ್ಡ್ ಇತ್ಯಾದಿಗಳನ್ನು ಉಪಯೋಗಿಸುವ ಸಾಮರ್ಥ್ಯವನ್ನು ಹೊಂದಿರಬೇಕು ಹಾಗೂ ನಿಖರವಾಗಿ ಮತ್ತು ವೇಗವಾಗಿ ಬೆರಳಚ್ಚು ಮಾಡುವ ಸಾಮರ್ಥ್ಯವನ್ನು ಹೊಂದಿರಬೇಕು ಕಂಪ್ಯೂಟರ್ ಜ್ಞಾನ ಹೊಂದಿರುವ ಅಭ್ಯರ್ಥಿಗಳಿಗೆ ಹಾಗೂ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸಲು ಆಸಕ್ತಿ ಇರುವಂತಹ ಸೂಕ್ತ/ಯೋಗ್ಯ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

3. ಪ್ರಸ್ತಾವನೆಯಲ್ಲಿ ವಿವರಿಸಿದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಲಬುರಗಿಯ ಕಾನೂನು ಅಭಿರಕ್ಷಕ ಕಛೇರಿಯಲ್ಲಿ ಜವಾನ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ, ಉಲ್ಲೇಖ 1 ಮತ್ತು 2 ರಲ್ಲಿ ನಮೂದಿಸಿರುವ ಪತ್ರಗಳಲ್ಲಿನ ಷರತ್ತುಗಳನ್ನು ಒಳಗೊಂಡಂತೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ

| ಕ್ರ.ಸಂ. | ಹುದ್ದೆಯ ಹೆಸರು | ಹುದ್ದೆಗಳ ಸಂಖ್ಯೆ | ಮಾಸಿಕ ವೇತನ |
|---|---|---|---|
| 1. | ಜವಾನ | 1 | ರೂ.15202/- |

**ವಿದ್ಯಾರ್ಹತೆ:**

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ನಡೆಸುವ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು ಮತ್ತು ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸಲು ಆಸಕ್ತಿ ಇರುವಂತಹ ಸೂಕ್ತ / ಯೋಗ್ಯ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

## 4. ಅರ್ಜಿಸಲ್ಲಿಕೆಯ ದಿನಾಂಕ

ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: **24.11.2023.**

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: **11.12.2023.**

## 5. ಅರ್ಜಿಸಲ್ಲಿಸುವ ವಿಧಾನ

ಅರ್ಹ ಅಭ್ಯರ್ಥಿಗಳು ಈ ಅಧಿಸೂಚನೆಯೊಂದಿಗೆ ನೀಡಿರುವ ನಮೂನೆಯಲ್ಲಿ ತಮ್ಮ ಸಂಪೂರ್ಣ ಮಾಹಿತಿಯನ್ನು ಭರ್ತಿಮಾಡಿ ಈ ಕೆಳಕಂಡ ದಾಖಲೆಗಳೊಂದಿಗೆ ಹಾಗೂ ಪಾಸ್‌ಪೋರ್ಟ್ ಅಳತೆಯ 2 ಇತ್ತೀಚಿನ ಭಾವಚಿತ್ರಗಳೊಂದಿಗೆ ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯಾಲಯ ಆವರಣ, ಕಲಬುರಗಿ ಇಲ್ಲಿಗೆ ಕೊನೆಯ ದಿನಾಂಕದೊಳಗಾಗಿ ಅಂದರೆ ದಿನಾಂಕ **11.12.2023** ರೊಳಗಾಗಿ ಸಲ್ಲಿಸತಕ್ಕದ್ದು ಹಾಗೂ ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

- ಎಸ್.ಎಸ್.ಎಲ್.ಸಿ ಅಂಕಪಟ್ಟಿ
- ಪದವಿ ವಿದ್ಯಾರ್ಹತೆ ಅಂಕಪಟ್ಟಿ (ಗುಮಾಸ್ತ ಹಾಗೂ ಸ್ವಾಗತಕಾರರು ಹುದ್ದೆಗಳಿಗೆ)
- ಪ್ರೌಢ ದರ್ಜೆಯಲ್ಲಿ ಕನ್ನಡ ಮತ್ತು ಇಂಗ್ಲೀಷ ಬೆರಳಚ್ಚು ಪ್ರಮಾಣ ಪತ್ರ (ಗುಮಾಸ್ತ ಹಾಗೂ ಸ್ವಾಗತಕಾರರು ಹುದ್ದೆಗೆ)
- ಕಂಪ್ಯೂಟರ್ ಜ್ಞಾನ ಹೊಂದಿದ ಬಗ್ಗೆ ಪ್ರಮಾಣ ಪತ್ರ
- ಆಧಾರ ಕಾರ್ಡ / ಚುನಾವಣೆ ಗುರತಿನ ಪತ್ರ / ವಾಹನ ಚಾಲನ ಪತ್ರ (ವಿಳಾಸದ ಗುರುತಿಗಾಗಿ)

## 6. ನೇಮಕಾತಿ ವಿಧಾನ

೧ ಆಡಳಿತ ಸಹಾಯಕ–ವ–ಗುಮಾಸ್ತ ಹುದ್ದೆಗೆ ಮತ್ತು ಸ್ವಾಗತಕರರು–ವ–ಡಾಟಾ ಎಂಟ್ರಿ ಆಪರೇಟರ್ ಹುದ್ದೆಗಳಿಗೆ ಸಂಬಂಧಿಸಿದಂತೆ ಕೌಶಲ್ಯ ಪರೀಕ್ಷೆ, ಬೆರಳಚ್ಚು ಪರೀಕ್ಷೆ (ಕನ್ನಡ ಮತ್ತು ಇಂಗ್ಲೀಷನಲ್ಲಿ ತಲಾ 10 ನಿಮಿಷಗಳ ಉಕ್ತಲೇಖನಕ್ಕೆ ಬೆರಳಚ್ಚು ಮಾಡುವ ಪರೀಕ್ಷೆ) ಯಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ,

ಕಂಪ್ಯೂಟರ್ ಮತ್ತು ಬೆರಳಚ್ಚು ನಿಖರತೆ ಮತ್ತು ನೈಪುಣ್ಯತೆ ಆಧರಿಸಿ ನೇರ ನೇಮಕಾತಿ.

- ಜವಾನ ಹುದ್ದೆಗೆ ಅಭ್ಯರ್ಥಿಯು ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

## 7. ಷರತ್ತುಗಳುಃ

- ಸದರಿ ಹುದ್ದೆಗೆ ಅಭ್ಯರ್ಥಿಗಳನ್ನು ಸಂಪೂರ್ಣ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲಾಗುವುದು ಹಾಗೂ ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕದಿಂದ 06 ತಿಂಗಳ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ (ಯಾವುದು ಮೊದಲೋ ಅಲ್ಲಿಯವರೆಗೆ) ನೇಮಕ ಮಾಡಿಕೊಳ್ಳಲಾಗುವುದು.
- ಸದರಿ ಹುದ್ದೆಯು ಸಂಪೂರ್ಣ ತಾತ್ಕಾಲಿಕವಾಗಿದ್ದು, ನೇಮಕಗೊಂಡ ಅಭ್ಯರ್ಥಿಯು ಸದರಿ ಹುದ್ದೆಯಲ್ಲಿ ಅವರನ್ನು ಖಾಯಂಗೊಳಿಸಲು ಯಾವುದೇ ಹಕ್ಕನ್ನು ಪ್ರತಿಪಾದಿಸಲು ಅವಕಾಶವಿರುವುದಿಲ್ಲ.
- ಸದರಿ ಹುದ್ದೆಗೆ ನಿಗದಿಗೊಳಿಸಿರುವ ಮಾಸಿಕ ಸಂಭಾವನೆಯು ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದಿಂದ ನಿರ್ಧರಿಸಲ್ಪಟ್ಟಿದ್ದು, ಈ ಕುರಿತು ಸರ್ಕಾರದದಿಂದ ಅಥವಾ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದಿಂದ ಮುಂದೆ ಹೊರಡಿಸಬಹುದಾದ ಮಾರ್ಗಸೂಚಿಗಳಿಗೆ ಅನುಸಾರ ಬದಲಾವಣೆಗೆ ಒಳಪಡುವಂತಹ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.
- ನೇಮಕಗೊಂಡ ಅಭ್ಯರ್ಥಿಯ ಕರ್ತವ್ಯವು ತೃಪ್ತಿಕರವಾಗಿಲ್ಲವೆಂದು ಕಂಡುಬಂದಂತಹ ಸಂದರ್ಭದಲ್ಲಿ ಯಾವುದೇ ಮುನ್ಸೂಚನೆ ಇಲ್ಲದೇ ತೆಗೆದುಹಾಕಲಾಗುವುದು.
- ನೇಮಕಗೊಂಡ ಅಭ್ಯರ್ಥಿಯು ಅಗತ್ಯಬಿದ್ದರೆ ಸಾರ್ವತ್ರಿಕ ರಜಾ ದಿನಗಳಲ್ಲೂ ಸಹ ಕಚೇರಿ ಕರ್ತವ್ಯ ನಿರ್ವಹಿಸಲು ಬದ್ಧರಾಗಿರತಕ್ಕದ್ದು.
- ನೇಮಕಗೊಂಡ ಅಭ್ಯರ್ಥಿಗಳು ತಮ್ಮ ಕರ್ತವ್ಯದಲ್ಲಿ ಸದಾ ಶಿಸ್ತು ಬದ್ಧರಾಗಿರತಕ್ಕದ್ದು ಹಾಗೂ ಯಾವುದೇ ದುರ್ನಡತೆ, ಅಶಿಸ್ತು ತೋರಿದರೆ ಅಥವಾ ಹಣಕಾಸು ದುರುಪಯೋಗ ಮಾಡಿರುವುದು ಕಂಡು ಬಂದಲ್ಲಿ ನಿಯಮಾನುಸಾರ ಶಿಕ್ಷೆಗೆ ಮತ್ತು ದಂಡನೆಗೆ ಗುರಿಪಡಿಸಲಾಗುವುದು.
- ಯಾವುದೇ ಕಾರಣಗಳಿಂದ ಅಭ್ಯರ್ಥಿಗಳು ತಮ್ಮ ಹುದ್ದೆಗಳನ್ನು ತ್ಯಜಿಸಲು ಇಚ್ಛಿಸಿದರೆ ಆ ಕುರಿತು ಒಂದು ತಿಂಗಳ ಮುಂಚಿತವಾಗಿ ಪ್ರಾಧಿಕಾರಕ್ಕೆ ಮಾಹಿತಿ ನೀಡತಕ್ಕದ್ದು.

# APPLICATION FOR THE POST OF OFFICE ASSISTANT / CLERK RECEPTIONIST-CUM DATA ENTRY OPERATOR, DALAYATH IN LEGAL AID DEFENSE COUNSEL OFFICE.

PHOTO

Name of the District: Kalaburagi

| | |
|---|---|
| Name of the Applicant | |
| Name of the his / her father / Husband | |
| Date of Birth and Age | |
| Gender | |
| Postal address | |
| Education qualifications | |
| Mobile No | |
| Email ID | |

Place:
Date

Signature